**C** **SL. No. : S**

ಒಟ್ಟು ಪ್ರಶ್ನೆಗಳ ಸಂಖ್ಯೆ : 64 ]
Total No. of Questions : 64 ]

**CCE PR**
**REVISED**

[ ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 8
[ Total No. of Printed Pages : 8

**ಸಂಕೇತ ಸಂಖ್ಯೆ : 01-K** **Code No. : 01-K**

# ವಿಷಯ : ಪ್ರಥಮ ಭಾಷೆ — ಕನ್ನಡ
# Subject : First Language — KANNADA

**(ಹೊಸ ಪಠ್ಯಕ್ರಮ / New Syllabus)**

**(ಪುನರಾವರ್ತಿತ ಖಾಸಗಿ ಅಭ್ಯರ್ಥಿ / Private Repeater)**

ದಿನಾಂಕ : 25. 06. 2019 ] [ Date : 25. 06. 2019

ಸಮಯ : ಬೆಳಗ್ಗೆ 9-30 ರಿಂದ 12-45 ರವರೆಗೆ ] [ Time : 9-30 A.M. to 12-45 P.M.

ಗರಿಷ್ಠ ಅಂಕಗಳು : 125 ] [ Max. Marks : 125

### *ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :*

1. ಈ ಪ್ರಶ್ನೆಪತ್ರಿಕೆಯು 64 ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳನ್ನು ಹೊಂದಿದೆ.

2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.

3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.

4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.

5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

ಇಲ್ಲಿ ಕತ್ತರಿಸಿ

**TEAR HERE TO OPEN THE QUESTION PAPER**
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

**Tear here**

## ವಿಭಾಗ – 'ಎ'

### (ಪಠ್ಯಗಳ ಅಧ್ಯಯನ – ಗದ್ಯ, ಪದ್ಯ, ಪಠ್ಯಪೂರಕ ಅಧ್ಯಯನ)

**ಈ ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ :** $16 \times 1 = 16$

1. ರಾಹಿಲನು ಮುದುಕಿಯ ಎದುರಿಗೆ ನುಡಿದ ಗಂಭೀರವಾದ ಮಾತು ಯಾವುದು ?
2. ರಾಹಿಲನು ಯಾರು ?
3. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿಯ ಹೆಸರೇನು ?
4. 'ವೆಸ್ಟ್ ಮಿನ್‌ಸ್ಟರ್ ಅಬೆ' ಯಾರ ಸ್ಮಾರಕವಾಗಿದೆ ?
5. ಹುಲಿಯನ್ನು ಎದುರಿಸಲು ಶಾನುಭೋಗರಿಗೆ ಯಾವುದು ಬ್ರಹ್ಮಾಸ್ತ್ರವಾಯಿತು ?
6. ಸುಕುಮಾರಸ್ವಾಮಿಯ ತಂದೆ–ತಾಯಿಗಳ ಹೆಸರೇನು ?
7. ಜಿ.ಎಸ್. ಶಿವರುದ್ರಪ್ಪನವರ ಪ್ರಕಾರ ಯಾವ ಎಚ್ಚರದೊಳು ಬದುಕಬೇಕಿದೆ ?
8. ಕವಿ ಬೇಂದ್ರೆಯವರ ಪ್ರಕಾರ ಹಕ್ಕಿಯು ಯಾವುದರ ಸಂಕೇತವಾಗಿದೆ ?
9. ಹಕ್ಕಿಯು ಯಾರ ನೆತ್ತಿಯನ್ನು ಕುಕ್ಕಿದೆ ?
10. ಕುಂಪಣಿ ಸರಕಾರ ಹೊರಡಿಸಿದ ಆದೇಶ ಏನು ?
11. ಅಶ್ವಿನಿದೇವತೆಗಳ ವರಬಲದಿಂದ ಜನಿಸಿದವರು ಯಾರು ?
12. ಕವಿ ಕುವೆಂಪುರವರು ನೋಡಿದ ಅಡಿಕೆಯ ತೋಟ ಎಲ್ಲಿದೆ ?
13. ದಿನಪಸುತ ಎಂದರೆ ಯಾರು ?
14. ಪರಶುರಾಮನು ದ್ರೋಣನಿಗೆ ಕೊಟ್ಟ ಪ್ರಧಾನ ಅಸ್ತ್ರಗಳು ಯಾವುವು ?
15. ವಸಂತ ಯಾರಿಗೆ ಮುಖ ತೋರಲಿಲ್ಲ ?
16. ಒಡೆಯನ ಅಂಗಳದಲಿ ಮೈತುಂಬಿ ನಿಂತ ಮರಗಳಾವುವು ?

**ಈ ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $16 \times 2 = 32$

17. ಮಹಿಳೆಯ ಆರ್ತನಾದ ಕೇಳಿ ರಾಹಿಲನು ಮನದಲ್ಲಿ ಏನೆಂದುಕೊಂಡನು ?
18. ಸಾಮ್ರಾಟರ ರಾಜ್ಯಾಭಿಷೇಕವಾಗುವ ಸಿಂಹಾಸನದ ಮೇಲಿರುವ ಕಲ್ಲುಪಾಟಿಯ ವಿಶೇಷತೆಯೇನು ?
19. ವೂಲವರ್ಥ ಅಂಗಡಿಯಲ್ಲಿ ಸಿಗುವ ವಸ್ತುಗಳಾವುವು ?
20. ಮದಲಿಂಗನ ಕಣಿವೆಯಲ್ಲಿ ಬರುವಾಗ ಶಾನುಭೋಗರ ಮನದಲ್ಲಿ ಮೂಡಿದ ಭಾವನೆಗಳಾವುವು ?
21. ಹುಲಿಯು ಹಿಂದಿನಿಂದ ಹಾರಿ ಕೊಲ್ಲದಿರಲು ಕಾರಣಗಳೇನು ?
22. ದುಷ್ಟಬುದ್ಧಿಯು ತನ್ನ ತಂದೆಯನ್ನು ಸಾಕ್ಷಿಮಾಡಿ ಒಪ್ಪಿಸಿದ ಬಗೆಯನ್ನು ತಿಳಿಸಿ.
23. ಸುಕುಮಾರಸ್ವಾಮಿಯು ಹೇಗೆ ಸುಖಭೋಗಗಳನ್ನು ಅನುಭವಿಸುತ್ತಿದ್ದನು ?

24. ವೃಷಭಾಂಕನು ಸುಕುಮಾರಸ್ವಾಮಿಗೆ ವ್ಯಾಧಿಯಿದೆ ಎಂದುಕೊಳ್ಳಲು ಕಾರಣವೇನು ?

25. ಲಾವಣಿಗಳನ್ನು ಏಕೆ ವೀರಗೀತೆಗಳು ಎನ್ನಲಾಗಿದೆ ?

26. ವಾಲ್ಮೀಕಿ ಆಶ್ರಮಕ್ಕೆ ಯಜ್ಞಾಶ್ವವು ಬಂದ ಬಗೆಯನ್ನು ತಿಳಿಸಿ.

27. ಪರಶುರಾಮನು ಮಣ್ಣಿನ ಪಾತ್ರೆಯಲ್ಲಿ ಅರ್ಘ್ಯವನ್ನು ಕೊಡಲು ಕಾರಣವೇನು ?

28. ದ್ರುಪದನ ಮಾತಿಗೆ ದ್ರೋಣನ ಪ್ರತ್ಯುತ್ತರವೇನು ?

29. ಜಾತಿ ವ್ಯವಸ್ಥೆಯ ಬಗೆಗೆ ವಿವೇಕಾನಂದರ ಅಭಿಪ್ರಾಯವೇನು ?

30. ಜನರಲ್ ಡಯರ್‌ನು ಜಲಿಯನ್ ವಾಲಾಭಾಗ್‌ನಲ್ಲಿ ಮಾಡಿಸಿದ ಕ್ರೂರ ಪೈಶಾಚಿಕ ಕೃತ್ಯವನ್ನು ತಿಳಿಸಿ.

31. ಸುಂದರಿಗೆ ಮೃಗವನ್ನು ಮತ್ತೆ ನೋಡಬೇಕೆಂಬ ಆಸೆ ತೀವ್ರವಾಗಲು ಕಾರಣಗಳಾವುವು ?

32. 'ಉತ್ತರಾಣಿ ಗಿಡ' ಎಂಬ ಉತ್ತರ ಬರಲು ಹೇಳಿದ ಒಗಟನ್ನು ಬರೆಯಿರಿ.

**ಈ ಕೆಳಗಿನ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ :** 6 × 3 = 18

33. "ಯಾವ ಜೀವಿಯೂ ತನ್ನಷ್ಟಕ್ಕೆ ತಾನಿಲ್ಲ"

34. "ಅವರಿಗೆ ಅವರವರ ಪ್ರಜ್ಞೆಯೇ ದೇವರಾಗಿತ್ತು"

35. "ಈತನ ಮಾತು ಅಶ್ರುತಪೂರ್ವಮ್"

36. "ಹೊಸಗಾಲದ ಹಸುಮಕ್ಕಳ ಹರಸಿ"

37. "ಹೊಡೆದರೊ ಗುಂಡ ಕರುಣ ಇಲ್ಲದ್ಹಂಗ"

38. "ಅರಸುಗಳ ವಾಜಿಯಂ ಬಿಡು"

**ಈ ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** 2 × 3 = 6

39. ಪು.ತಿ. ನರಸಿಂಹಾಚಾರ್

40. ಕುವೆಂಪು

41. **ಈ ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** 1 × 4 = 4

ಪುಟ್ಟಿದ ನೂರ್ವರು ..............................................

..................................................................

..................................................................

..................................................................

.......................................... ಛಲಮನೆ ಮೆಱೆವೆಂ॥

***ಅಥವಾ***

ನೆಲಕಿಳಿವೆನೆಂದು ..............................................

...........................................................

...........................................................

...........................................................

............................................ ಪುದುವಾಳ್ದಿಪೆನೇ॥

42. **ಈ ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** $1 \times 4 = 4$

ಕಲುಷಿತವಾದೀ ನದೀಜಲಗಳಿಗೆ
ಮುಂಗಾರಿನ ಮಳೆಯಾಗೋಣ
ಬರಡಾಗಿರುವೀ ಕಾಡುಮೇಡುಗಳ
ವಸಂತವಾಗುತ ಮುಟ್ಟೋಣ.

**ಈ ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ :** $2 \times 4 = 8$

43. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಮೈಸೂರು 'ಮಾದರಿ ಮೈಸೂರು ರಾಜ್ಯ' ಹೇಗಾಯಿತು ?

*ಅಥವಾ*

ವಿಶ್ವೇಶ್ವರಯ್ಯ ಅವರು ಎಂಜಿನಿಯರ್‌ರಾಗಿ ಸಲ್ಲಿಸಿದ ಸೇವೆಯನ್ನು ಕುರಿತು ಬರೆಯಿರಿ.

44. ಪಾಂಡವರು ಸೋದರರೆಂದು ತಿಳಿದಾಗ ಕರ್ಣನ ಮನಸ್ಥಿತಿಯನ್ನು ತಿಳಿಸಿ.

*ಅಥವಾ*

ಕರ್ಣನಿಗೆ ಶ್ರೀಕೃಷ್ಣನು ಒಡ್ಡಿದ ಆಸೆ ಆಮಿಷಗಳೇನು ?

45. **ಈ ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :** $2 \times 2 = 4$

ಮಹಾತ್ಮ ಬಸವಣ್ಣನವರು ಕಟ್ಟಬಯಸಿದ್ದು ಸರ್ವಶೋಷಣೆಗಳಿಂದಲೂ ಮುಕ್ತವಾದ, ಸ್ವಾತಂತ್ರ್ಯ, ಸಮಾನತೆ, ಸೌಹಾರ್ದಗಳ ಅಡಿಗಲ್ಲಿನ ಮೇಲೆ ನಿಂತ, ಸರ್ವೋದಯ ನಿಷ್ಠವಾದ ಒಂದು ಆದರ್ಶ ಸಮಾಜವನ್ನು. ಅವರು ಕಲ್ಪಿಸಿಕೊಂಡು ಕಟ್ಟಬಯಸಿದ ನೂತನ ಸಮಾಜದ ಒಂದು ಮುಖ್ಯಾಧಾರವೆಂದರೆ ಕಾಯಕ ತತ್ತ್ವ. ಕಾಯಕಕ್ಕೆ ಬಸವಣ್ಣನವರಿತ್ತ ಪ್ರಾಧಾನ್ಯ ಅತ್ಯಂತ ಗಮನಾರ್ಹವಾದುದು. ಸಮಾಜದ ಪ್ರತಿಯೊಬ್ಬ ವ್ಯಕ್ತಿಯೂ ಏನಾದರೊಂದು ದೈಹಿಕವಾದ ಕೆಲಸ ಮಾಡಬೇಕು, ಅದರಿಂದಲೇ ಜೀವನ ನಡೆಸಬೇಕು ಎಂಬುದು ಕಾಯಕ ತತ್ತ್ವದ ಒಂದು ಮುಖವಾದರೆ ಯಾವ ಕೆಲಸವೂ ಕೀಳಲ್ಲ, ಪ್ರತಿಯೊಂದು ಕೆಲಸವೂ ಪವಿತ್ರ ಎನ್ನುವುದು ಇನ್ನೊಂದು ಮುಖ. ಅನೇಕ ಸಾಮಾಜಿಕ, ಆರ್ಥಿಕ ಸಮಸ್ಯೆಗಳಿಗೆ ರಾಮಬಾಣವಾಗಬಲ್ಲುದು ಈ ಕಾಯಕತತ್ತ್ವ. ಸಮಾಜದ ಅಸಮತೆ, ದಾರಿದ್ರ್ಯಗಳನ್ನು ನಿವಾರಿಸುವ ಏಕೈಕ ಮಂತ್ರವಾಗಿದೆ; 'ಕಾಯಕವೇ ಕೈಲಾಸ'.

ಬಸವಣ್ಣನವರು ಸಂಸಾರತ್ಯಾಗವನ್ನು ವಿಧಿಸುವುದಿಲ್ಲ. ಸಂಸಾರದಲ್ಲಿದ್ದುಕೊಂಡೇ ಪರಮಾರ್ಥವನ್ನು ಸಾಧಿಸುವ ಕಲೆಯನ್ನು ಅವರು ಉಪದೇಶಿಸಿದ್ದಾರೆ. ಅಂತರಂಗ–ಬಹಿರಂಗಗಳ ಸಾಮರಸ್ಯವನ್ನು ಅವರು ವಿಶೇಷವಾಗಿ ಒತ್ತಿ ಹೇಳಿದ್ದಾರೆ; ಒಳ್ಳೆಯ ಆಲೋಚನೆ, ಆಲೋಚನೆಗೆ ತಕ್ಕನುಡಿ, ನುಡಿಗೆ ತಕ್ಕ ನಡೆ – ಇವುಗಳನ್ನು ಬೋಧಿಸಿದ್ದಾರೆ. 'ನುಡಿಗೆ ತಕ್ಕ ನಡೆಯ ಕಂಡರೆ ಕೂಡಲಸಂಗಮದೇವ ತನ್ನೊಳಗಿರ್ಪನಯ್ಯ' ಎಂಬುದು ಅವರ ಆಶ್ವಾಸನೆ. ಅಂತರಂಗದ ಅರಿವು ಬಹಿರಂಗದ ಕ್ರಿಯೆ ಎರಡಕ್ಕೂ ಅವರು ಸಮಾನ ಪುರಸ್ಕಾರ ನೀಡಿದ್ದಾರೆ.

ಪ್ರಶ್ನೆಗಳು :

ಅ) ಕಾಯಕತತ್ತ್ವದ ಎರಡು ಮುಖಗಳಾವುವು ?

ಆ) ಅಂತರಂಗ–ಬಹಿರಂಗಗಳ ಸಾಮರಸ್ಯದ ಕುರಿತು ಬಸವಣ್ಣನವರ ಬೋಧನೆಗಳೇನು ?

## ವಿಭಾಗ – 'ಬಿ'

## (ಅನ್ವಯಿಕ ವ್ಯಾಕರಣ, ಅಲಂಕಾರ ಹಾಗೂ ಛಂದಸ್ಸು)

**ಈ ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಹೆಚ್ಚು ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ :** 10 × 1 = 10

46. 'ವಧೂಪೇತ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

(ಎ) ಗುಣ ಸಂಧಿ (ಬಿ) ಯಣ್ ಸಂಧಿ

(ಸಿ) ವೃದ್ಧಿ ಸಂಧಿ (ಡಿ) ಸವರ್ಣದೀರ್ಘ ಸಂಧಿ

47. ಒಂದು ಅಭಿಪ್ರಾಯದ ವಿವರಣೆ ಮುಂದೆ ತಿಳಿಸಿದಂತೆ ಇದೆ ಎಂದು ತೋರಿಸುವ ಸಂದರ್ಭದಲ್ಲಿ ಬಳಸುವ ಲೇಖನ ಚಿಹ್ನೆ

(ಎ) ಭಾವಸೂಚಕ ಚಿಹ್ನೆ (ಬಿ) ವಿವರಣಾತ್ಮಕ ಚಿಹ್ನೆ

(ಸಿ) ಉದ್ಧರಣ ಚಿಹ್ನೆ (ಡಿ) ವಾಕ್ಯವೇಷ್ಟನ ಚಿಹ್ನೆ

48. 'ಊರನ್ನು' ಪದದಲ್ಲಿರುವ ವಿಭಕ್ತಿಯಿದು

(ಎ) ಚತುರ್ಥಿ (ಬಿ) ತೃತೀಯಾ

(ಸಿ) ದ್ವಿತೀಯಾ (ಡಿ) ಪ್ರಥಮಾ

49. 'ಮಹಾಶಕ್ತನಾದ ದೇವರು ಸಮಸ್ತಲೋಕಗಳನ್ನು ಪ್ರೀತಿಯಿಂದ ಕಾಪಾಡುವನು' – ಈ ವಾಕ್ಯವು

(ಎ) ಸಾಮಾನ್ಯ ವಾಕ್ಯ (ಬಿ) ಸಂಯೋಜಿತ ವಾಕ್ಯ

(ಸಿ) ಮಿಶ್ರ ವಾಕ್ಯ (ಡಿ) ಸಂಭಾವನಾರ್ಥಕ ವಾಕ್ಯ

50. 'ಗಮಕ' ಸಮಾಸಕ್ಕೆ ಉದಾಹರಣೆಯಿದು

(ಎ) ನಡುರಾತ್ರಿ (ಬಿ) ಹನುಮಭೀಮರಾಮರು

(ಸಿ) ನೆಯ್ಸವಸ್ತ್ರ (ಡಿ) ಮೋಸಮಾಡು

51. 'ಸೊಗಸಾಗಿ' ಪದವು ಅವ್ಯಯದ ಈ ಗುಂಪಿಗೆ ಸೇರಿದೆ

(ಎ) ಕ್ರಿಯಾರ್ಥಕಾವ್ಯಯ (ಬಿ) ಸಾಮಾನ್ಯಾರ್ಥಕಾವ್ಯಯ

(ಸಿ) ಸಂಬಂಧಾರ್ಥಕಾವ್ಯಯ (ಡಿ) ಅವಧಾರಣಾರ್ಥಕಾವ್ಯಯ

52. ಅನ್ವರ್ಥನಾಮ ಪದಕ್ಕೆ ಉದಾಹರಣೆಯಿದು

(ಎ) ವಿಜ್ಞಾನಿ (ಬಿ) ರಾಹುಲ

(ಸಿ) ಮನುಷ್ಯ (ಡಿ) ಮೂವರು

53. ವಿಧ್ಯರ್ಥಕ ರೂಪದಲ್ಲಿರುವ ಕ್ರಿಯಾಪದವಿದು

(ಎ) ಮಾಡನು (ಬಿ) ಮಾಡಿಯಾನು

(ಸಿ) ಮಾಡೆವು (ಡಿ) ಮಾಡೋಣ

54. ತದ್ಧಿತಾಂತನಾಮಕ್ಕೆ ಉದಾಹರಣೆಯಾಗುವ ಪದವಿದು

(ಎ) ಸಿರಿತನ (ಬಿ) ಜಾಣತನ

(ಸಿ) ಕನ್ನಡಿಗ (ಡಿ) ಶಾಲೆಯತನಕ

55. ಪೋರ್ಚ್‌ಗೀಸ್‌ನಿಂದ ಕನ್ನಡಕ್ಕೆ ಬಂದಿರುವ ಅನ್ಯದೇಶಿ ಪದ

(ಎ) ಕಾಲೇಜು (ಬಿ) ಸಾಬೂನು

(ಸಿ) ದವಾಖಾನೆ (ಡಿ) ಕಾರ್ಖಾನೆ

**ಈ ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ :** 4 × 1 = 4

56. ನಡುನಡುವೆ : ದ್ವಿರುಕ್ತಿ :: ಹಾಲ್ಜೇನು : ......................... .

57. ತವಸಿ : ತಪಸ್ವಿ :: ಬೇಹಾರಿ : ......................... .

58. ಹಣತೆ : ದೀಪ :: ಹರಿಕಾರ : ......................... .

59. ಗುರುಮೂರಿರೆ : ಮಗಣ :: ಲಘುಮೂರಿರೆ : ......................... .

60. **ಈ ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** 1 × 3 = 3

ಎನ್ನಣುಗಾಳನೆನ್ನಣುಗದಮ್ಮನನಿಕ್ಕಿದ ಪಾರ್ಥಭೀಮರುಳ್

***ಅಥವಾ***

ನಿನಗೆ ಹಸ್ತಿನಪುರದ ರಾಜ್ಯದ

ಘನತೆಯನು ಮಾಡುವೆನು ಪಾಂಡವ

ಜನಪ ಕೌರವ ಜನಪರೋಲೈಸುವರು ಗದ್ದುಗೆಯ

61. **ಈ ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** 1 × 3 = 3

ಪೂರ್ವದಿಕ್ಕಿನಲ್ಲಿ ಮೂಡಿದ ಸೂರ್ಯನು ಮುತ್ತೈದೆಯ ಹಣೆಯಲ್ಲಿರುವ ಕುಂಕುಮದಂತೆ ಕಂಡನು.

***ಅಥವಾ***

ಆತನು ಪರೀಕ್ಷೆಯಲ್ಲಿ ಪ್ರಥಮ ಸ್ಥಾನ ಪಡೆದು ಉತ್ತೀರ್ಣನಾದನು. ಬುದ್ಧಿವಂತರಾದ ಮಕ್ಕಳಿಗೆ ಪರೀಕ್ಷೆಯೊಂದು ಲೆಕ್ಕವೇ ?

## ವಿಭಾಗ – 'ಸಿ'

## (ವಾಕ್ಯರಚನೆ ಹಾಗೂ ಬರೆವಣಿಗೆ ಕೌಶಲ)

62. **ಈ ಕೆಳಗೆ ಕೊಟ್ಟಿರುವ ಗಾದೆಗಳಲ್ಲಿ ಯಾವುದಾದರೂ *ಒಂದನ್ನು* ವಿಸ್ತರಿಸಿ ಬರೆಯಿರಿ :** $1 \times 3 = 3$

   * ಕೈ ಕೆಸರಾದರೆ ಬಾಯಿ ಮೊಸರು
   * ಕಟ್ಟುವುದು ಕಠಿಣ; ಕೆಡಹುವುದು ಸುಲಭ
   * ಗಿಡವಾಗಿ ಬಗ್ಗದ್ದು ಮರವಾಗಿ ಬಗ್ಗೀತೆ

63. ನಿಮ್ಮನ್ನು ಕೂಡಲಸಂಗಮದ ಸರ್ಕಾರಿ ಪ್ರೌಢಶಾಲೆಯ 'ಜಗದೀಶ' ಎಂದು ಭಾವಿಸಿಕೊಂಡು ನಿಮ್ಮ ಶಾಲೆಯಲ್ಲಿ ಏರ್ಪಡಿಸಿದ 'ಮತದಾನ ಜಾಗೃತಿ' ಕಾರ್ಯಕ್ರಮದ ವರದಿಯನ್ನು ಪ್ರಕಟಿಸುವಂತೆ ಕೋರಿ 'ವಿಜಯವಾಣಿ' ದಿನಪತ್ರಿಕೆಯ ಸಂಪಾದಕರಿಗೆ ಒಂದು ಮನವಿ ಪತ್ರ ಬರೆಯಿರಿ. $1 \times 5 = 5$

**_ಅಥವಾ_**

ನಿಮ್ಮನ್ನು ಮುಧೋಳದ 'ಕವಿಚಕ್ರವರ್ತಿ ರನ್ನ ಬಡಾವಣೆ'ಯಲ್ಲಿ ವಾಸವಾಗಿರುವ 'ಶ್ವೇತಾ' ಎಂದು ಭಾವಿಸಿಕೊಂಡು ನಿಮ್ಮ 'ಪರೀಕ್ಷಾ ಸಿದ್ಧತೆಗಳ' ಕುರಿತು ಬೆಳಗಾವಿಯ ಬೈಲಹೊಂಗಲದಲ್ಲಿರುವ 'ಚನ್ನಮ್ಮ' ಎಂಬ ಹೆಸರಿನ ತಾಯಿಯವರಿಗೆ ಒಂದು ಪತ್ರ ಬರೆಯಿರಿ.

64. **ಈ ಕೆಳಗಿನ ವಿಷಯಗಳಲ್ಲಿ ಯಾವುದಾದರೂ *ಒಂದನ್ನು* ಕುರಿತು ಹದಿನೈದು ವಾಕ್ಯಗಳಿಗೆ ಕಡಿಮೆ ಇಲ್ಲದಂತೆ ಪ್ರಬಂಧ ಬರೆಯಿರಿ :** $1 \times 5 = 5$

   * ರಾಷ್ಟ್ರೀಯ ಭಾವೈಕ್ಯತೆ ಬೆಳೆಸುವಲ್ಲಿ ಕ್ರೀಡೆಗಳ ಮಹತ್ವ
   * ಪ್ರಾಕೃತಿಕ ಸಂಪತ್ತಿನ ರಕ್ಷಣೆಯಲ್ಲಿ ಯುವ ಜನತೆಯ ಪಾತ್ರ
   * ತ್ಯಾಜ್ಯವಸ್ತುಗಳ ನಿರ್ವಹಣೆ